**2ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ : 673/2017**

**ಚಾಸಾ - 20 / ಪ್ರಾಸಾ - 07**

| | |
|---|---|
| ಹೆಸರು | **ಕಿರಣ್** |
| ತಂದೆಯ ಹೆಸರು | **ಜಯರಾಮಯ್ಯ** |
| ವಯಸ್ಸು | **61** |
| ಉದ್ಯೋಗ | **ವೈದ್ಯಾಧಿಕಾರಿ, ಗಾಯಿತ್ರಿ ಆಸ್ಪತ್ರೆ** |
| ವಿಳಾಸ | **ಬೆಂಗಳೂರು** |

**ದಿನಾಂಕ: 05-02-2026** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ - ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ-**

ನಾನು ಕಳೆದ 20 ವರ್ಷಗಳಿಂದ ಗಾಯಿತ್ರಿ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದೇನೆ.

ದಿ.09.10.2016 ರಂದು ರಾತ್ರಿ 11.30 ಗಂಟೆ ಸಮಯದಲ್ಲಿ ಆರೋಪಿಯು ಅಪಘಾತದ ವಿಷಯಕ್ಕೆ ಸಂಬಂಧಿಸಿದಂತೆ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದಿರುತ್ತಾರೆ. ನಾನು ಆರೋಪಿರವರನ್ನು ಪರಿಶೀಲನೆ ಮಾಡಿರುತ್ತೇನೆ. ಆರೋಪಿಯ ತಲೆಯ ಬಲಬಾಗದಲ್ಲಿ ಜಜ್ಜಿದ ಗಾಯ ಆಗಿರುತ್ತದೆ. ಈ ಮೇಲೆ ಹೇಳಿರುವ ಗಾಯವು ಸಾಮಾನ್ಯ ಸ್ವರೂಪದ ಗಾಯ ಆಗಿರುತ್ತದೆ. ಈಗ ಸಾಕ್ಷಿಗೆ ಗಾಯದ ಪ್ರಮಾಣಪತ್ರವನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಗಾಯದ ಪ್ರಮಾಣಪತ್ರವನ್ನು ನಿಪಿ-10 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

ದಿ.09.10.2016 ರಂದು ರಾತ್ರಿ 11.30 ಗಂಟೆ ಸಮಯದಲ್ಲಿ ಚಾಸಾ-4ರವರು ಅಪಘಾತದ ವಿಷಯಕ್ಕೆ ಸಂಬಂಧಿಸಿದಂತೆ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದಿರುತ್ತಾರೆ.

ನಾನು ಚಾಸಾ-4ರವರನ್ನು ಪರಿಶೀಲನೆ ಮಾಡಿರುತ್ತೇನೆ. ಚಾಸಾ-4ರವರ ಎಡಗಾಲಿನ ಮೇಲೆ ತರಚಿದ ಗಾಯ ಮತ್ತು ಎಡ ಮಂಡಿಯ ಮೇಲೆ ರಕ್ತ ಹೆಪ್ಪುಗಟ್ಟಿರುತ್ತದೆ. ಈ ಮೇಲೆ ಹೇಳಿರುವ 1ನೇ ಗಾಯವು ಸಾಮಾನ್ಯ ಸ್ವರೂಪದ ಗಾಯವಾಗಿದ್ದು, ಮತ್ತು ಎರಡನೇ ಗಾಯ ತೀವ್ರ ಸ್ವರೂಪದ ಗಾಯವಾಗಿರುತ್ತದೆ. ಈಗ ಸಾಕ್ಷಿಗೆ ಗಾಯದ ಪ್ರಮಾಣಪತ್ರವನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಗಾಯದ ಪ್ರಮಾಣಪತ್ರವನ್ನು ನಿಪಿ-11 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು.

ದಿ.09.10.2016 ರಂದು ರಾತ್ರಿ 11.00 ಗಂಟೆ ಸಮಯದಲ್ಲಿ ಚಾಸಾ-3ರವರು ಅಪಘಾತದ ವಿಷಯಕ್ಕೆ ಸಂಬಂಧಿಸಿದಂತೆ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬಂದಿರುತ್ತಾರೆ. ನಾನು ಚಾಸಾ-3ರವರನ್ನು ಪರಿಶೀಲನೆ ಮಾಡಿರುತ್ತೇನೆ. ಚಾಸಾ-3ರವರ ಮೂಗಿನಿಂದ ರಕ್ತ ಸ್ರಾವ ಆಗಿರುತ್ತದೆ ಮತ್ತು ಮೂಗು ಊದಿಕೊಂಡಿರುತ್ತದೆ. ಈ ಮೇಲೆ ಹೇಳಿರುವ ಗಾಯಗಳು ಸಾಮಾನ್ಯ ಸ್ವರೂಪದ ಗಾಯವಾಗಿರುತ್ತವೆ. ಈಗ ಸಾಕ್ಷಿಗೆ ಗಾಯದ ಪ್ರಮಾಣಪತ್ರವನ್ನು ತೋರಿಸಿದ್ದು, ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಗಾಯದ ಪ್ರಮಾಣಪತ್ರವನ್ನು ನಿಪಿ-12 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಃ-ಆರೋಪಿಯ ಪರ ಶ್ರೀ. ಎ.ಎಸ್.ಎಸ್, ವಕೀಲರಿಂದ ಃ-**

ಹಲ್ಲೆ ಮತ್ತು ಅಪಘಾತದ ಪ್ರಕರಣಗಳಲ್ಲಿ ಎಂ.ಎಲ್.ಸಿ ಯನ್ನು ನೊಂದಣಿ ಮಾಡಲಾಗುತ್ತದೆ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಎಂ.ಎಲ್.ಸಿ ನೊಂದಣಿ ಸಂಖ್ಯೆ ಯನ್ನು ನೀವು ನಿಪಿ-10 ರಿಂದ 12 ರಲ್ಲಿ ನಮೂದಿಸಿರುವುದಿಲ್ಲ ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ.

ಚಾಸಾ-21 ರಿಂದ 23ರವರು ನನ್ನ ಬಳಿ ಸದರಿ ಎಂ.ಎಲ್.ಸಿ ರಿಜಿಸ್ಟರ್ ಅನ್ನು ಕೇಳಿರುವುದಿಲ್ಲ .

**ಮರು ವಿಚಾರಣೆ - ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2ನೇ ಅ. ನ್ಯಾ . ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**